# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1007 |
| ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24-02-2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೇಂದ್ರ ಸರ್ಕಾರದ ಮಾದರಿಯಲ್ಲಿ ಹಳೇ ವಾಹನಗಳನ್ನು ಗುಜರಿಗೆ ಹಾಕುವ ಸ್ಕ್ರಾಪ್ ನೀತಿ ರಾಜ್ಯದಲ್ಲಿ ಜಾರಿಗೆ ತರಲಾಗುವುದೇ; ಹಾಗಿದ್ದಲ್ಲಿ ಇದರ ಮುಖ್ಯ ಉದ್ದೇಶವೇನು; | ಕೇಂದ್ರ ಸರ್ಕಾರದ ಮಾದರಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಹಳೆಯ ವಾಹನಗಳನ್ನು ಗುಜರಿಗೆ ಹಾಕುವ ಸ್ಕ್ರಾಪ್ ನೀತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಟಿಡಿ 191 ಟಿಡಿಓ 2022 ದಿನಾಂಕ:30-12-2022 ರನ್ವಯ ಈಗಾಗಲೇ ಜಾರಿಗೊಳಿಸಲಾಗಿದೆ.<br>ಸಾರ್ವಜನಿಕ ರಸ್ತೆಗಳಲ್ಲಿ ಹಳೆಯ ವಾಹನಗಳ ಬಳಕೆಯಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದ್ದು, ಈ ಯೋಜನೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮವಾಗುವುದನ್ನು ತಡೆಗಟ್ಟಬಹುದಾಗಿದೆ. ಹಳೆಯ ವಾಹನಗಳನ್ನು ನಾಶಪಡಿಸಿ ಹೊಸ ವಾಹನಗಳ ಖರೀದಿಯಿಂದ ಕಚ್ಚಾ ಸಾಮಗ್ರಿಗಳ ಮರು ಬಳಕೆಗೆ ಆಟೋಮೊಬೈಲ್ ಕ್ಷೇತ್ರ ಬೃಹತ್ ಉದ್ಯಮವಾಗಿ ರಾಜ್ಯದ ಆರ್ಥಿಕತೆಗೆ ಸಹಾಯಕವಾಗುತ್ತದೆ. ಸದರಿ ಯೋಜನೆಯ ನೇರ ಪರಿಣಾಮದಿಂದಾಗಿ, ವಿವಿಧ ಉದ್ಯೋಗಗಳ ಸೃಷ್ಟಿ ಮತ್ತು ಬೃಹತ್ ಮೊತ್ತದ ಬಂಡವಾಳ ರಾಜ್ಯಕ್ಕೆ ಬರುತ್ತದೆ. |
| ಆ | ಎಷ್ಟು ವರ್ಷಗಳ ಹಿಂದಿನ ವಾಹನಗಳನ್ನು ಸ್ಕ್ರಾಪ್ ನೀತಿಯೊಳಗೆ ತರಲು ಯೋಜಿಸಲಾಗಿದೆ (ವಿವರವಾದ ಮಾಹಿತಿಯನ್ನು ಒದಗಿಸುವುದು) | ಕೇಂದ್ರ ಸರ್ಕಾರದ ಅಧಿಸೂಚನೆ ಸಂ.G.S.R.29(E) ದಿನಾಂಕ:16-1-2023 ರಂತೆ, ಕೇಂದ್ರ, ರಾಜ್ಯ ಸರ್ಕಾರ, ರಸ್ತೆ ಸಾರಿಗೆ ನಿಗಮಗಳು, ನಗರಸಭೆ, ಪುರಸಭೆ, ಪಂಚಾಯತಿ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧೀನದ ಸಾರ್ವಜನಿಕ ವಲಯದ ಸಂಸ್ಥೆಗಳು, ಸ್ವಾಯತ್ತ ಸಂಸ್ಥೆಗಳು ಹೊಂದಿರುವ 15 ವರ್ಷ ಮೀರಿದ ವಾಹನಗಳನ್ನು ದಿನಾಂಕ:01-04-2023 ರಿಂದ ಕಡ್ಡಾಯವಾಗಿ ನಾಶಪಡಿಸಬೇಕಾಗುತ್ತದೆ.<br>ವಾಹನಗಳ ಮಾಲೀಕರ ಸ್ವಯಂಪ್ರೇರಿತ ಆಧಾರದ ಮೇಲೆ 15 ವರ್ಷ ಹಳೆಯದಾದ ಸಾರಿಗೇತರ ವಾಹನಗಳನ್ನು ಮತ್ತು 8 ವರ್ಷ ಹಳೆಯದಾದ ಸಾರಿಗೆ ವಾಹನಗಳನ್ನು ಸ್ಕ್ರಾಪ್ ನೀತಿಯೊಳಗೆ ತರಲು ಯೋಜಿಸಲಾಗಿದೆ |
| ಇ | ರಾಜ್ಯದಲ್ಲಿ ಎಲ್ಲೆಲ್ಲಿ ನೋಂದಾಯಿತ ವಾಹನ ಗುಜರಿ ಕೇಂದ್ರಗಳನ್ನು (ಆರ್.ವಿ.ಎಸ್.ಎಫ್.) ತೆರೆಯಲು ಉದ್ದೇಶಿಸಲಾಗಿದೆ: (ವಿವರವಾದ ಮಾಹಿತಿ ಒದಗಿಸುವುದು) | ಸರ್ಕಾರದ ಆದೇಶ ಸಂ.ಟಿಡಿ 191 ಟಿಡಿಓ 2022 ದಿನಾಂಕ: 30-12-2022ರಲ್ಲಿ ನೋಂದಾಯಿತ ವಾಹನಗಳ ಸ್ಕ್ರಾಪಿಂಗ್ ನೀತಿ 2022ನ್ನು ಸಾರಿಗೆ ಇಲಾಖೆಯ ಜಾಲತಾಣ www.transport.karnataka.gov.in ರಲ್ಲಿ ಪ್ರಕಟಿಸಲಾಗಿದ್ದು, ಅದರಡಿ ಕೇಂದ್ರ ಸರ್ಕಾರದ |

| | | |
|---|---|---|
| | | ಪೋರ್ಟಲ್ ದಡಿ ಏಕಗವಾಕ್ಷಿಯಲ್ಲಿ www.nsws.gov.in ಜಾಲತಾಣದಲ್ಲಿ ಆಸಕ್ತ ಮತ್ತು ಅರ್ಹ ಸಾರ್ವಜನಿಕರು ನಿಯಮಾನುಸಾರ ಆರ್.ವಿ.ಎಸ್.ಎಫ್. ಕೇಂದ್ರ ತೆರೆಯಲು ರಾಜ್ಯ ಸರ್ಕಾರದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಪರಿಶೀಲಿಸಿ ಮುಂದಿನ ದಿನಗಳಲ್ಲಿ ಅರ್ಹ ಸಂಸ್ಥೆಗಳಿಗೆ RVSF (Registered Vehicle Scrapping Facility) ಕೇಂದ್ರ ತೆರೆಯಲು ಅನುಮತಿ ನೀಡಲಾಗುವುದು. |
| ಈ | ಬೆಂಗಳೂರು ನಗರ ಪ್ರದೇಶದಲ್ಲಿ ಹೆಚ್ಚಿನ ಜನರು ವೈಯಕ್ತಿಕ ವಾಹನ ಬಳಕೆ ಮಾಡುತ್ತಿರುವುದರಿಂದ ವಿಪರೀತ ಸಂಚಾರ ದಟ್ಟಣೆ ಮತ್ತು ಪರಿಸರ ಮಾಲಿನ್ಯ ಉಂಟಾಗುತ್ತಿದ್ದು ವಾಹನ ದಟ್ಟಣೆ ಹಾಗೂ ವಾಯುಮಾಲಿನ್ಯ ತಗ್ಗಿಸುವ ನಿಟ್ಟಿನಲ್ಲಿ ಹೆಚ್ಚಾಗಿ ಸಾರ್ವಜನಿಕ ಸಾರಿಗೆಯನ್ನು (Public transport) ಬಳಕೆಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು? | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವತಿಯಿಂದ ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸಲು ಹಾಗೂ ವಾಯು ಮಾಲಿನ್ಯ ತಗ್ಗಿಸುವ ನಿಟ್ಟಿನಲ್ಲಿ, ಹೆಚ್ಚಾಗಿ ಸಾರ್ವಜನಿಕ ಸಾರಿಗೆಯನ್ನು (Public transport) ಬಳಕೆಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.<br>• ಸಂಸ್ಥೆಯು ವಿವಿಧ ಮಾದರಿಯ ಸೇವೆಗಳಾದ ಸಾಮಾನ್ಯ, ವಜ್ರ, ವಾಯುವಜ್ರ, ಮೆಟ್ರೋ ಫೀಡರ್ ಸೇವೆಗಳನ್ನು ಕಾರ್ಯಾಚರಣೆ ಮಾಡುತ್ತಿದೆ.<br>• ಸಂಸ್ಥೆಯು "ಸಹಾಯ ಹಸ್ತ ಪಾಸು" ಒಳಗೊಂಡಂತೆ ವಿವಿಧ ರೀತಿಯ ರಿಯಾಯಿತಿ ಪಾಸುಗಳನ್ನು ವಿತರಣೆ ಮಾಡುತ್ತಿದೆ.<br>• ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದೈನಿಕ, ಸಾಪ್ತಾಹಿಕ ಹಾಗೂ ಮಾಸಿಕ ಪಾಸುಗಳನ್ನು ಆನ್‌ಲೈನ್ ಮೂಲಕ Digital Pass ಪಡೆಯಲು ಕ್ರಮ ಕೈಗೊಳ್ಳಲಾಗಿದೆ.<br>• 2022-23ನೇ ಸಾಲಿನಲ್ಲಿ 238 ಬಿ.ಎಸ್-6 ಡೀಸೆಲ್ ಇಂಧನದ ಸಾಮಾನ್ಯ ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲಾಗಿದೆ.<br>• ಭಾರತ ಸರ್ಕಾರದ ಫೇಮ್-2 ಯೋಜನೆಯಲ್ಲಿ 300 ಹವಾನಿಯಂತ್ರಿತ ಬಸ್ಸುಗಳು, ರಾಜ್ಯ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ಮೆಟ್ರೋ ಫೀಡರ್ ಬಸ್ಸುಗಳು, ಒಟ್ಟಾರೆ 390 ಎಲೆಕ್ಟ್ರಿಕ್ ಬಸ್ಸುಗಳನ್ನು GCC Model ಆಧಾರದ ಮೇಲೆ ಕಾರ್ಯಾಚರಣೆ ಮಾಡಲು ಕ್ರಮ ಕೈಗೊಂಡಿದ್ದು, ಪ್ರಸ್ತುತ 250 ಎಲೆಕ್ಟ್ರಿಕ್ ಬಸ್ಸುಗಳನ್ನು ವಿವಿಧ ಮಾರ್ಗಗಳಲ್ಲಿ ಆಚರಣೆ ಮಾಡಲಾಗುತ್ತಿದೆ.<br>• ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ M/s.CESL ವತಿಯಿಂದ 921 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್ಸುಗಳನ್ನು GCC Model ಆಧಾರದ ಮೇಲೆ ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.<br>• 803 ಬಿ.ಎಸ್-6 ಡೀಸೆಲ್ ವಾಹನಗಳನ್ನು ಖರೀದಿಸಿ ಆಚರಣೆ ಮಾಡಲಾಗುತ್ತಿದೆ.<br>• ಪ್ರಸ್ತುತ 840 ಬಿ.ಎಸ್-6 ಡೀಸೆಲ್ ಬಸ್ಸುಗಳನ್ನು ಖರೀದಿಸಲು ಆದೇಶವನ್ನು ನೀಡಲಾಗಿರುತ್ತದೆ.<br>• ರಾಜ್ಯ ನಗರ ಸಾರಿಗೆ ನಿಧಿ(SUTF) ಯಿಂದ 05 ಡಬ್ಬಲ್ ಡೆಕ್ಕರ್ ಬಸ್ಸುಗಳು ಹಾಗೂ 20 ಚಿಕ್ಕ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

FA/1074520

| | | |
|---|---|---|
| | | • National Clean Air Programme (NCAP) ಸಹಾಯಧನದಿಂದ 05 ಡಬ್ಬಲ್ ಡೆಕ್ಕರ್ ಬಸ್ಸುಗಳು ಹಾಗೂ 100 ಚಿಕ್ಕ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಮುಂದುವರೆದು, ಸಾರಿಗೆ ಇಲಾಖೆಯ ವತಿಯಿಂದ ಪ್ರತಿ ವರ್ಷ ನವಂಬರ್ ಮಾಹೆಯಲ್ಲಿ ವಾಯು ಮಾಲಿನ್ಯ ನಿಯಂತ್ರಣ ಮಾಸಾಚರಣೆಯನು ನಿರಂತರವಾಗಿ ಕೈಗೊಳ್ಳುತ್ತಿದ್ದು, ಸಾರ್ವಜನಿಕರಲ್ಲಿ ವೈಯಕ್ತಿಕ ವಾಹನಗಳ ಬಳಕೆ ಕಡಿಮೆ ಮಾಡಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಬಳಸಿಕೊಳ್ಳಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಬೀದಿ ನಾಟಕ, ಪಾದಯಾತ್ರೆ ಹಮ್ಮಿಕೊಂಡು ಸಾರ್ವಜನಿಕರಲ್ಲಿ ಹಳೆಯ ವಾಹನಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. |

ಟಿಡಿ 15 ಟಿಡಿಕ್ಯೂ 2023

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು.